ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆಗಳ ಸಚಿವರು):

ಅ)		ಸಿವಿಲ್	ಕ್ರಿಮಿನಲ್	ಒಟ್ಟು
1.	ಕರ್ನಾಟಕ ಉಚ್ಚ ನ್ಯಾಯಾಲಯ	84,824	4594	89418
2.	ರಾಜ್ಯದ ಇತರೆ ಅಧೀನ ನ್ಯಾಯಾಲಯ	650012	552212	1202224

ಆ) ಹೌದು

ಇ) ಈ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ರಾಜ್ಯ ಹೈಕೋರ್ಟ್ ಸೂಚಿಸುವಂತೆ ಸಂಬಂಧಪಟ್ಟ ನ್ಯಾಯಾಲಯಗಳಿಗೆ ಅಗತ್ಯವಾಗಿ ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಕಾರ್ಮಿಕ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು

601 (1127) ಶ್ರೀ ಜಿ.ವಿ. ಶ್ರೀ ರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಶಾಸನ ರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಕಾರ್ಮಿಕ ನ್ಯಾಯಾಲಯಗಳಲ್ಲಿ ಇತ್ಯರ್ಥವಾಗದೇ ಬಾಕಿ ಉಳಿದಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ?

ಆ) ಈ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಸರ್ಕಾರ ಬಯಸಿದೆಯೇ ?

ಇ) ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆಗಳ ಸಚಿವರು):

ಅ) ದಿನಾಂಕ : 1.2.99ಕ್ಕೆ ರಾಜ್ಯದ ಕಾರ್ಮಿಕ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ : 14,979 ಇರುತ್ತವೆ.

ಆ) ಹೌದು.

ಇ) ಈ ಪ್ರಕರಣಗಳನ್ನು ಇತ್ಯರ್ಥಪಡಿಸಲು ನ್ಯಾಯಾಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.